# ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 560001

ಸಂ: ಸಿ4(5)ಪ್ರೌ.ಶಿ./ಎಂಪಿಕ್/ಸುತ್ತೋಲೆ–2/2018–19 ದಿನಾಂಕ: 31.01.2019

## : : ಸುತ್ತೋಲೆ : :

ವಿಷಯ: ಶಿಕ್ಷಕರಿಗೆ ಶೈಕ್ಷಣಿಕೇತರ ಸಭೆ ಸಮಾರಂಭಗಳಿಗೆ ಅನ್ಯಕಾರ್ಯನಿಮಿತ್ತ ರಜೆ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ: ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಎಂಪಿಕ್ ಮಾಸಿಕ ಸಭೆ ದಿನಾಂಕ:18.01.2019.

**********

ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ವಿವಿಧ ವೃಂದದ ಶಿಕ್ಷಕರ ಸಂಘಟನೆಗಳ ಪದಾಧಿಕಾರಿಗಳು ಶೈಕ್ಷಣಿಕ ವರ್ಷದ ಶಾಲಾ ದಿನಗಳಲ್ಲಿ ಶೈಕ್ಷಣಿಕೇತರ ವಿವಿಧ ಸಭೆ, ಸಮಾರಂಭ, ಕಾರ್ಯಾಗಾರ ಮತ್ತು ವಿಚಾರಗೋಷ್ಠಿಗಳನ್ನು ಹಮ್ಮಿಕೊಳ್ಳುತ್ತಿದ್ದು, ಇದಕ್ಕೆ ಪೂರಕವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಶಿಕ್ಷಕರು ಭಾಗವಹಿಸುವ ಸಲುವಾಗಿ ಅನ್ಯಕಾರ್ಯನಿಮಿತ್ತ ರಜೆ ಮಂಜೂರು ಮಾಡುವಂತೆ ಸಂಘದ ಪದಾಧಿಕಾರಿಗಳು ಮನವಿ ಸಲ್ಲಿಸುತ್ತಿರುವುದನ್ನು ಗಮನಿಸಿ, ಶಿಕ್ಷಕರ ಸಂಘದ ಪದಾಧಿಕಾರಿಗಳು ಮೂಲತಃ ಶಿಕ್ಷಕ ವೃತ್ತಿಗೆ ಗೌರವ ಸೂಚಿಸುವುದು ಅವರ ಆದ್ಯ ಕರ್ತವ್ಯವಾಗಿರುತ್ತದೆ. ಇದನ್ನರಿತು ಅನ್ಯ ಕಾರ್ಯನಿಮಿತ್ತ ರಜೆಗೆ ಮನವಿ ಸಲ್ಲಿಸುವಂತೆ ಹಾಗೂ ಶೈಕ್ಷಣಿಕ ವರ್ಷದಲ್ಲಿ ಎರಡು ದಿನಗಳಿಗೆ ಮೀರದಂತೆ ಅನ್ಯ ಕಾರ್ಯ ನಿಮಿತ್ತ ರಜೆ ಮಂಜೂರು ಮಾಡುವ ಕುರಿತು ಅಗತ್ಯ ನಿರ್ದೇಶನ ನೀಡುವಂತೆ ಉಲ್ಲೇಖಿತ ಸಭೆಯಲ್ಲಿ ಸೂಚಿಸಿರುತ್ತಾರೆ.

ಉತ್ತಮ ಆರೋಗ್ಯಕರ ಸಮಾಜವನ್ನು ನಿರ್ಮಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ತರವಾಗಿರುತ್ತದೆ. ಸಮಾಜದಲ್ಲಿ ಶಿಕ್ಷಕ ವೃತ್ತಿಗೆ ವಿಶೇಷ ಗೌರವವಿದೆ. ಇದನ್ನರಿತು ಶಿಕ್ಷಕರು ತಮ್ಮ ಬೋಧನಾ ಸಾಮಾರ್ಥ್ಯವನ್ನು ವೃದ್ಧಿಸುವ ಕಾರ್ಯಾಗಾರಗಳಲ್ಲಿ ಭಾಗವಹಿಸಿ ತಮ್ಮ ವೃತ್ತಿಯಲ್ಲಿ ಅಳವಡಿಸಿಕೊಂಡು ವಿದ್ಯಾರ್ಥಿಗಳಿಗೆ ಪಾಠ ಬೋಧನೆ ಮಾಡಬೇಕಿದೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹಾಗೂ ಶಿಕ್ಷಕ ವೃತ್ತಿಯನ್ನು ಗೌರವಿಸುವ ಸಲುವಾಗಿ ಯಾವುದೇ ಸಂಘದ ಬೇಡಿಕೆಯನುಸಾರ ಶಿಕ್ಷಕರಿಗೆ ಶೈಕ್ಷಣಿಕ ವರ್ಷದಲ್ಲಿ ಎರಡು ಬಾರಿ ಮಾತ್ರ ಶೈಕ್ಷಣಿಕೇತರ ಸಭೆ ಸಮಾರಂಭಗಳಲ್ಲಿ ಭಾಗವಹಿಸಲು ಅನುಮತಿ ನೀಡಲಾಗುತ್ತದೆ ಎಂಬ ಅಂಶವನ್ನು ತಮಗೆ ತಿಳಿಯಪಡಿಸಿದೆ.

ನಿರ್ದೇಶಕರು (ಪ್ರೌಢ ಶಿಕ್ಷಣ)

**ಇವರಿಗೆ:–**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ/ ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು:**

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ರವರಿಗೆ.
2. ರಾಜ್ಯ ಯೋಜನಾ ನಿರ್ದೇಶಕರು, ಎಸ್.ಎಸ್.ಎ/ಆರ್.ಎಂ.ಎಸ್.ಎ., ನೃಪತುಂಗ ರಸ್ತೆ, ಬೆಂಗಳೂರುರವರಿಗೆ.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ.
4. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
5. ರಾಜ್ಯದ ಅಸ್ತಿತ್ವದಲ್ಲಿರುವ ಮಾನ್ಯತೆ ಪಡೆದ ವಿವಿಧ ವೃಂದಗಳ ಶಿಕ್ಷಕರ ಸಂಘದ ಪದಾಧಿಕಾರಿಗಳಿಗೆ.
6. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ಕಛೇರಿ ಪ್ರತಿ.